# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1604 |
| ಸದಸ್ಯರ ಹೆಸರು : | ಡಾ|| ಯತೀಂದ್ರ ಎಸ್. (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 19.12.2025 |
| ಉತ್ತರಿಸುವ ಸಚಿವರು : | ಹಿಂದುಳಿದ ವರ್ಗಗಳ ಕಲ್ಯಾಣ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿ ಒದಗಿಸುವ ಸ್ವಾವಲಂಬಿ ಸಾರಥಿ ಯೋಜನೆಗೆ ಸಾವಿರಾರು ಆಕಾಂಕ್ಷಿಗಳು ಅರ್ಜಿಗಳನ್ನು ಸಲ್ಲಿಸುತ್ತಿದ್ದು, ಯೋಜನಾ ಗುರಿ ಕಡಿಮೆ ಇರುವುದರಿಂದ ತೀರಾ ಕಡಿಮೆ ಫಲಾನುಭವಿಗಳು ಆಯ್ಕೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಯೋಜನಾ ಗುರಿ ಹೆಚ್ಚಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಸ್ವಾವಲಂಬಿ ಸಾರಥಿ ಯೋಜನೆಯನ್ನು 2023-24ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನಕ್ಕನುಗುಣವಾಗಿ ಕ್ರಿಯಾ ಯೋಜನೆಯನ್ನು ರೂಪಿಸಿ, ಅದರಂತೆ ಗುರಿ ನಿಗದಿಪಡಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿ ಒದಗಿಸುವ ಸ್ವಾವಲಂಬಿ ಸಾರಥಿ ಯೋಜನೆಯ ಘಟಕ ವೆಚ್ಚ ಕಡಿಮೆ ಇದ್ದು, ಫಲಾನುಭವಿಗಳಿಗೆ ಸಾಲದ ಹೊರೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಘಟಕ ವೆಚ್ಚ ಹೆಚ್ಚಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಆದೇಶ ಸಂಖ್ಯೆ: ಹಿಂವಕ 394 ಬಿಎಂಎಸ್ 2023, ದಿನಾಂಕ:22.09.2023 ರಲ್ಲಿ ನಿಗದಿಪಡಿಸಿರುವ ಮಾರ್ಗಸೂಚಿಗಳನ್ವಯ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಸ್ವಾವಲಂಬಿ ಸಾರಥಿ ಯೋಜನೆಯಡಿ ಫಲಾನುಭವಿಗಳು ನಾಲ್ಕು ಚಕ್ರದ ವಾಹನವನ್ನು ಖರೀದಿಸಲು ಬ್ಯಾಂಕ್‌ನಿಂದ ಮಂಜೂರು ಮಾಡಿದ ಸಾಲದ ಶೇ.50ರಷ್ಟು ಅಥವಾ ಗರಿಷ್ಟ ರೂ.3.00 ಲಕ್ಷಗಳವರೆಗೆ ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಸಹಾಯಧನವನ್ನು ನಿಗಮದಿಂದ ಮಂಜೂರು ಮಾಡಲಾಗುತ್ತದೆ. ಉಳಿಕೆ ಮೊತ್ತವನ್ನು ಫಲಾನುಭವಿಗಳು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲದ ರೂಪದಲ್ಲಿ ಪಡೆಯಬೇಕಾಗುತ್ತದೆ, ಈ ಸಾಲಕ್ಕೆ ಬ್ಯಾಂಕ್/ ಹಣಕಾಸು ಸಂಸ್ಥೆಗಳು ನಿಗದಿಪಡಿಸುವ ಬಡ್ಡಿಯನ್ನು ಫಲಾನುಭವಿಗಳು ಪಾವತಿಸಬೇಕಾಗುತ್ತದೆ.<br><br>ಮುಂದುವರೆದು, ಖರಿದೀಸುವ ವಾಹನದ ಅಂದಾಜು ಮೊತ್ತವು ರೂ.6.00 ರಿಂದ 10.00 ಲಕ್ಷಗಳಾಗಿರುತ್ತದೆ. ಇದರಲ್ಲಿ ಶೇ.30 ರಿಂದ ಶೇ.50ರ ವರೆಗೆ ನಿಗಮದಿಂದ ಸಹಾಯಧನವನ್ನು ಒದಗಿಸಲಾಗುತ್ತಿದೆ. ಆದ್ದರಿಂದ, ಬ್ಯಾಂಕ್‌ಗಳಿಂದ ಪಡೆಯುವ ಸಾಲವು ಫಲಾನುಭವಿಗಳಿಗೆ ಹೆಚ್ಚಿನ ಹೊರೆಯಾಗುವುದಿಲ್ಲ. |

ಸಂಖ್ಯೆ:ಹಿಂವಕ 1256 ಬಿಎಂಎಸ್ 2025

**(ಶಿವರಾಜ ಎಸ್. ತಂಗಡಗಿ)**

ಹಿಂದುಳಿದ ವರ್ಗಗಳ ಕಲ್ಯಾಣ, ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು